## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ-72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ:**

2022-23ನೇ ಸಾಲಿನಲ್ಲಿ ಪಿ.ಎಂ.ಪೋಷಣ್ (ಮಧ್ಯಾಹ್ನ ಉಪಹಾರ ಯೋಜನೆ) ಅಡಿಯಲ್ಲಿ ಶಾಲಾ ಮಕ್ಕಳಿಗೆ "ವಿಶೇಷ ಭೋಜನ ಮತ್ತು ಶಾಲೆಗಾಗಿ ನಾವು-ನೀವು ಕಾರ್ಯಕ್ರಮದಡಿಯಲ್ಲಿ ಸ್ಥಳೀಯ ಗ್ರಾಮಸ್ಥರನ್ನು, ಪೋಷಕರನ್ನು, ಸಾರ್ವಜನಿಕರನ್ನು, ಮಕ್ಕಳನ್ನು ಆಹ್ವಾನಿಸಿ ಊರಿನ ವಿವಿಧ ಹಬ್ಬಗಳಂದು, ರಾಷ್ಟ್ರೀಯ ಹಬ್ಬಗಳಂದು ಊರ ಜಾತ್ರೆ, ತೇರು, ಪೊರ, ಗ್ರಾಮದೇವತಾ ಹಬ್ಬಗಳಂದು, ಜನ್ಮದಿನಾಚರಣೆ, ಪುಣ್ಯ ಜಯಂತಿ, ಮದುವೆ, ವಾರ್ಷಿಕೋತ್ಸವಗಳು ಮುಂತಾದ ಕಾರಣಗಳಿಗೆ ಸಾಮೂಹಿಕ ಕೂಟಗಳನ್ನು, ಭೋಜನಗಳನ್ನು ತಿನಿಸುಗಳನ್ನು ತಯಾರಿಸಿ, ವಿದ್ಯಾರ್ಥಿಗಳಿಗೂ ಹಂಚುವ ಅವೈಜ್ಞಾನಿಕ ಸುತ್ತೋಲೆ ಹಿಂಪಡೆಯುವ ಬಗ್ಗೆ, 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗೆ ಮೊಟ್ಟೆ ವಿತರಿಸದೆ ಇರುವುದು ಹಾಗೂ 1 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ ಪ್ರವಾಸ ಯೋಜನೆಯನ್ನು ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೂ ವಿಸ್ತರಿಸದೆ ಇರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:-**

ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯನ್ವಯ ಹಾಗೂ ಕೇಂದ್ರ ಸರ್ಕಾರದ ಸೂಚನೆಯ ಮೇರೆಗೆ 2022-23ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ ಯೋಜನೆಯಡಿ (ಮಧ್ಯಾಹ್ನ ಉಪಹಾರ ಯೋಜನೆ) ರಾಜ್ಯದ ಶಾಲೆಗಳಲ್ಲಿ "ವಿಶೇಷ ಭೋಜನ ಮತ್ತು ಶಾಲೆಗಾಗಿ ನಾವು-ನೀವು" ಕಾರ್ಯಕ್ರಮವನ್ನು ಆಯೋಜಿಸಲು ಸುತ್ತೋಲೆಯನ್ನು ಹೊರಡಿಸಲಾಗಿದೆ. ಮಧ್ಯಾಹ್ನ ಉಪಹಾರ ಯೋಜನೆಯನ್ನು ಇನ್ನಷ್ಟು ಬಲವರ್ಧನೆಗೊಳಿಸಲು, ಶಾಲಾ ಮಕ್ಕಳ ಪೌಷ್ಟಿಕತೆಯನ್ನು ಇನ್ನಷ್ಟು ಹೆಚ್ಚುಸಲು ಸ್ಥಳೀಯ ಸಮುದಾಯ ಪಾಲ್ಗೊಂಡು ಅಗತ್ಯ ನೆರವು ಹಾಗೂ ಉತ್ತೇಜನ ನೀಡುವಂತೆ ಅವಕಾಶ ಕಲ್ಪಿಸುವ ದೃಷ್ಟಯಿಂದ ಈ ಕಾರ್ಯಕ್ರಮವನ್ನು ರೂಪಿಸಿ ಅನುಷ್ಠಾನಗೊಳಿಸಲಾಗಿದೆ.

"ವಿಶೇಷ ಭೋಜನ ಮತ್ತು ಶಾಲೆಗಾಗಿ ನಾವು-ನೀವು" ಕಾರ್ಯಕ್ರಮದ ಪ್ರಯೋಜನಗಳು ಹಾಗೂ ಉದ್ದೇಶಗಳು: ಕೆಳಕಂಡಂತಿದೆ:

1. ಸಮುದಾಯದಲ್ಲಿ ಯಾವುದೇ ವರ್ಗ, ಜಾತಿ, ಮತ, ಲಿಂಗ ಬೇಧವಿಲ್ಲದೇ ನಾವೆಲ್ಲರೂ ಒಂದು ಎಂಬ ಏಕತಾ ಭಾವನೆಯನ್ನು ಅಭಿವ್ಯಕ್ತಿಗೊಳಿಸುವುದು.
2. ಪೂರಕಾ ಆಹಾರವಾಗಿ ಮಧ್ಯಾಹ್ನ ಉಪಹಾರದ ಪೌಷ್ಟಿಕ ಮೌಲ್ಯವನ್ನು ಹೆಚ್ಚಿಸುವುದು.
3. ಸ್ಥಳೀಯ ಸಮುದಾಯದಲ್ಲಿ ಪರಸ್ಪರ ಉತ್ತಮ ಸಂಬಂಧ, ಸಂಪರ್ಕ, ಐಕ್ಯತೆ ಮತ್ತು ಸದ್ಭಾವನೆಯ ಬಾಂಧವ್ಯಗಳನ್ನು ಗಟ್ಟಿಗೊಳಿಸುವುದು.
4. ಯಾವುದೇ ಭೇದ-ಭಾವ ಇಲ್ಲದೇ ಎಲ್ಲಾ ಮಕ್ಕಳು ಒಟ್ಟಿಗೆ ಕುಳಿತು ವೈವಿಧ್ಯಮಯ ಪುಷ್ಠಿದಾಯಕವಾದ, ಶುಚಿ-ರುಚಿಕರವಾದ ಊಟೋಪಚಾರದಲ್ಲಿ ಪರಸ್ಪರ ಸಾಮರಸ್ಯ, ಪ್ರೀತಿ-ವಿಶ್ವಾಸ ಭಾವನೆಗಳಿಂದ ಪಾಲ್ಗೊಳ್ಳುವುದು.

ಪ್ರಸ್ತುತ ಈ ಕಾರ್ಯಕ್ರಮವನ್ನು ಶಾಲಾಭಿವೃದ್ಧಿ ಸಮಿತಿಯ ಒಪ್ಪಿಗೆ ಮೇರೆಗೆ ಸ್ಥಳೀಯ ದಾನಿಗಳು ಮತ್ತು ಪೋಷಕರು ಇಷ್ಟ ಪಟ್ಟಲ್ಲಿ ಮಾತ್ರ ಶಾಲೆಯಲ್ಲಿ ಅನುಷ್ಠಾನಗೊಳಿಸಲು ಸೂಚಿಸಲಾಗಿದ್ದು, ಮಾಡಲು ಈ ಕಾರ್ಯಕ್ರಮದ ಅನುಷ್ಠಾನವನ್ನು ಕಡ್ಡಾಯಗೊಳಿಸಿರುವುದಿಲ್ಲ. ಸದರಿ ಕಾರ್ಯಕ್ರಮವನ್ನು ಪೋಷಕರ ಹಾಗೂ ವಿದ್ಯಾರ್ಥಿಗಳ ಘನತೆ ಮತ್ತು ಗೌರವಕ್ಕೆ ಧಕ್ಕೆ ಬಾರದಂತೆ ಅನುಷ್ಠಾನ ಮಾಡಲು ಸೂಚಿಸಲಾಗಿದೆ. ಈ ಕಾರ್ಯಕ್ರಮವು ಶಾಲೆಯ ಮಧ್ಯಾಹ್ನದ ಬಿಸಿಯೂಟದ ಪೂರಕ ಕಾರ್ಯಕ್ರಮವಾಗಿದ್ದು, ಬದಲಿ ವ್ಯವಸ್ಥೆಯಾಗಿರುವುದಿಲ್ಲ. ಸದರಿ ಕಾರ್ಯಕ್ರಮವನ್ನು ಅನುಷ್ಠಾನ ಮಾಡುವಾಗ ಆರೋಗ್ಯ, ನೈರ್ಮಲ್ಯ ಹಾಗೂ ಆಹಾರ ಸುರಕ್ಷತೆಯ ಹಿತದೃಷ್ಟಿಯಿಂದ ಪಾಲಿಸಬೇಕಾಗಿರುವ ಸುರಕ್ಷತಾ ಕ್ರಮಗಳ ಬಗ್ಗೆ ಹಾಗೂ ನಿಬಂಧನೆಗಳ ಕುರಿತು ವಿವರವಾದ ಮಾರ್ಗಸೂಚಿಯಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸೂಚಿಸಲಾಗಿದೆ. ಸದರಿ ಕಾರ್ಯಕ್ರಮದಡಿಯಲ್ಲಿ ದಾನಿಗಳಿಂದ ಪೂರಕ ಆಹಾರ ಪದಾರ್ಥವಲ್ಲದೇ,

ಇತರೆ ವಸ್ತುಗಳಾದ ಶುದ್ಧ ಕುಡಿಯುವ ನೀರಿನ ವಾಟರ್ ಫಿಲ್ಟರ್, ತಟ್ಟೆ, ಲೋಟ, ಡೈನಿಂಗ್ ಟೇಬಲ್ ಸೆಟ್‌ಗಳು, ಸಾಬೂನು, ಆಹಾರ ಪದಾರ್ಥಗಳನ್ನು ಸಂಗ್ರಹಿಸುವ ಕಂಟೈನರ್‌ಗಳು, ಕುಕ್ಕರ್, ಮಿಕ್ಸಿ ಮತ್ತು ಶಾಲೆಗೆ ಅಗತ್ಯವಿರುವ ಇತರೆ ವಸ್ತುಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಸದರಿ ಕಾರ್ಯಕ್ರಮವನ್ನು ಈಗಾಗಲೇ ಗುಜರಾತ್, ಅಸ್ಸಾಂ, ಸೀಮಾಂಧ್ರ, ತೆಲಂಗಾಣ, ಪಂಜಾಬ್, ಮಧ್ಯಪ್ರದೇಶ, ಮಹಾರಾಷ್ಟ್ರ, ಪುದುಚೆರಿ, ಹರಿಯಾಣ ಮುಂತಾದ ರಾಜ್ಯಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ.

ಈಗಾಗಲೇ ರಾಜ್ಯದಲ್ಲಿ ಇಲಾಖೆಯಿಂದ ಜಾರಿಯಲ್ಲಿರುವ ಹಾಗೂ ಜನಪ್ರಿಯವಾಗಿರುವ "ಶಾಲೆಗಾಗಿ ನಾವು-ನೀವು" ಎಂಬ ಕಾರ್ಯಕ್ರಮದಡಿಯಲ್ಲಿ ಸಮುದಾಯದ ಪಾಲ್ಗೊಳ್ಳುವಿಕೆ, ಆರ್ಥಿಕ ನೆರವು ಹಾಗೂ ಸಹಭಾಗಿತ್ವದಿಂದ ಶಾಲೆಗಳ ಸರ್ವತೋಮುಖ ಅಭಿವೃದ್ಧಿಗೆ ನೆರವಾಗಿರುವುದರಿಂದ ಪ್ರಸ್ತುತ ರೂಪಿಸಲಾಗಿರುವ "ವಿಶೇಷ ಭೋಜನ ಮತ್ತು ಶಾಲೆಗಾಗಿ ನಾವು-ನೀವು" ಕಾರ್ಯಕ್ರಮವು ಮಕ್ಕಳಿಗೆ ಮತ್ತು ಶಾಲೆಗೆ ನೆರವಾಗಲಿದೆ. ಈ ಹಿನ್ನೆಲೆಯಲ್ಲಿ, ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಹೊರಡಿಸಲಾಗಿರುವ ಸುತ್ತೋಲೆಯನ್ನು ಹಿಂಪಡೆಯುವುದು ವಿದ್ಯಾರ್ಥಿಗಳ ಹಾಗೂ ಶಾಲೆಯ ಹಿತದೃಷ್ಟಿಯಿಂದ ಸೂಕ್ತವಾಗಿರುವುದಿಲ್ಲ.

ರಾಜ್ಯದಲ್ಲಿ 06 ರಿಂದ 15ನೇ ವಯೋಮಾನದವರೆಗಿನ ಶಾಲಾ ಮಕ್ಕಳಲ್ಲಿ ಅಂದರೆ 1 ರಿಂದ 8ನೇ ತರಗತಿ ಮಕ್ಕಳಲ್ಲಿ ಅಪೌಷ್ಟಿಕತೆ, ರಕ್ತಹೀನತೆ ಹಾಗೂ ಬಹುಪೋಷಕಾಂಶಗಳ ನ್ಯೂನತೆ ಅಧಿಕವಾಗಿರುವುದು, 2019-20ನೇ ಸಾಲಿನ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಯಿಂದ ಕಂಡುಬಂದಿರುತ್ತದೆ. ಇದರ ನಿವಾರಣೆಗಾಗಿ 2022-23ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ರಾಜ್ಯದಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ 1 ರಿಂದ 8ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮೊಟ್ಟೆ ಅಥವಾ ಮೊಟ್ಟೆ ಸೇವಿಸದ ಮಕ್ಕಳಿಗೆ ಬಾಳೆಹಣ್ಣು / ಶೇಂಗಾ ಚಿಕ್ಕಿಯನ್ನು ಪೂರಕ ಪೌಷ್ಟಿಕ ಆಹಾರದ ರೂಪದಲ್ಲಿ ಆದ್ಯತೆಯ ಮೇರೆಗೆ ವಿತರಿಸಲು ಕ್ರಮವಹಿಸಲಾಗಿದೆ.

ಸರ್ವಶಿಕ್ಷಣ ಅಭಿಯಾನ ಕಾರ್ಯಕ್ರಮದಡಿ ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ಅನುಮೋದನೆಯಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮತ್ತು ಅಲ್ಪಸಂಖ್ಯಾತ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡುವ ಹಿತದೃಷ್ಟಿಯಿಂದ, ಚಿಣ್ಣರ ಕರ್ನಾಟಕ ದರ್ಶನ (ನಂತರ ದಿನಗಳಲ್ಲಿ ಸದರಿ ಕಾರ್ಯಕ್ರಮವನ್ನು ಚಿಣ್ಣರ ಜಿಲ್ಲಾ ದರ್ಶನ ಎಂದು ಬದಲಾವಣೆ ಮಾಡಲಾಗಿರುತ್ತದೆ) ಎಂಬ ವಾರ್ಷಿಕ ಪ್ರವಾಸ ಕಾರ್ಯಕ್ರಮನ್ನು ಈ ಹಿಂದೆ ಅನುಷ್ಠಾನ ಮಾಡಲಾಗಿರುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅನುಷ್ಠಾನ ಮಾಡಬೇಕಾದ ಕಾರಣ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮವನ್ನು ವಿಸ್ತರಿಸಲು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಿರುವುದಿಲ್ಲ. ಪ್ರಸ್ತುತ ಸಮಗ್ರ ಶಿಕ್ಷಣ ಕಾರ್ಯಕ್ರಮದಡಿ 2021-22 ಮತ್ತು 2022-23ನೇ ಸಾಲಿನಲ್ಲಿ ವಿದ್ಯಾರ್ಥಿಗಳ ವಾರ್ಷಿಕ ಪ್ರವಾಸಕ್ಕೆ ಸಂಬಂಧಿಸಿದ ಚಟುವಟಿಕೆಯು ಕೇಂದ್ರ ಸರ್ಕಾರದ ಯೋಜನಾ ಅನುಮೋದನಾ ಮಂಡಳಿಯಿಂದ ಅನುಮೋದನೆಯಾಗಿರದ ಕಾರಣ ಕಳೆದ ಎರಡು ವರ್ಷಗಳಿಂದ ಪ್ರವಾಸವನ್ನು ಹಮ್ಮಿಕೊಂಡಿರುವುದಿಲ್ಲ.

**ಸಂಖ್ಯೆ : ಇಪಿ 78 ಎಂಎಂಎಸ್ 2022**

(ಬಿ.ಸಿ. ನಾಗೇಶ್)
**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**
**ಸಕಾಲ ಸಚಿವರು.**

C 153